ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ರೈತರುಗಳಿಗೆ ಬಡ್ಡಿ ರಹಿತ ಸಾಲ ನೀಡುವ ಬಗ್ಗೆ

ಶ್ರೀ ಎನ್. ಎಸ್.ಬೋಸ್‌ರಾಜು(ವಿಧಾನಸಭೆಯಿಂದ ಚುನಾಯಿತರಾದವರು):-

1519 (1855) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರಿನಲ್ಲಿರುವ ಆರ್‌ಡಿಸಿಸಿ ಬ್ಯಾಂಕ್ ವತಿಯಿಂದ ರೂ.3 ಲಕ್ಷದವರೆವಿಗೂ ಬಡ್ಡಿ ರಹಿತ ಸಾಲ ಪಡೆದ ಒಟ್ಟು ರೈತರುಗಳು ಎಷ್ಟು; ಸಾಲದ ಮೊತ್ತ ಎಷ್ಟು;

(ಆ) ರಾಯಚೂರು ಜಿಲ್ಲೆಯಲ್ಲಿರುವ ರೈತರುಗಳಿಗೆ ರೂ.3 ಲಕ್ಷದ ಮಿತಿವರೆವಿಗೂ ಸಾಲ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) 2019-20ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿರುವ ವಿಎಸ್‌ಎಸ್‌ಎನ್ ಸಹಕಾರ ಸಂಘಗಳಿಗೆ ಆರ್‌ಡಿಸಿಸಿ ಬ್ಯಾಂಕ್ ಹಾಗೂ ರಾಷ್ಟ್ರೀಯ ಬ್ಯಾಂಕುಗಳಿಂದ ನೀಡಿರುವ ಸಾಲದ ಮೊತ್ತ ಎಷ್ಟು; ಆರ್‌ಡಿಸಿಸಿ ಬ್ಯಾಂಕ್ ಹಾಗೂ ರಾಷ್ಟ್ರೀಯ ಬ್ಯಾಂಕುಗಳಿಂದ ಸಾಲ ಪಡೆದ ರೈತರ ಸಂಖ್ಯೆ ಎಷ್ಟು; ಇದರ ಅಂದಾಜು ಮೊತ್ತ ಎಷ್ಟು?